# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1775 (2099)
ಸದಸ್ಯರ ಹೆಸರು : ಶ್ರೀಮತಿ ಬಲ್ಕೀಸ್ ಬಾನು
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 25.03.2026
ಉತ್ತರಿಸುವ ಸಚಿವರು : ಕಂದಾಯ ಸಚಿವರು.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ರೈತರು ವ್ಯವಸಾಯ ಉದ್ದೇಶಗಳಿಗಾಗಿ ತಮ್ಮ ಸ್ವಂತ ಜಮೀನುಗಳಿಗೆ ಹೋಗಲು ರಸ್ತೆ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ನಕಾಶೆ ಕಂಡ ಕಾಲುದಾರಿ, ಬಂಡಿದಾರಿ ಅಥವಾ ರಸ್ತೆಗಳಲ್ಲಿ ಅನ್ಯ ಕೃಷಿ ಬಳಕೆದಾರರು ತಿರುಗಾಡಲು ಅವಕಾಶ ನೀಡದ ಅಡ್ಡಿಪಡಿಸುವಂತಹ ಅಥವಾ ಬಳಸಲು ಮುಚ್ಚಿರುವಂತಹ ಸಂದರ್ಭದಲ್ಲಿ, ಅವುಗಳನ್ನು ತೆರವುಗೊಳಿಸಿ ಅಂತಹ ದಾರಿಗಳನ್ನು ಸುಗಮಗೊಳಿಸಲು ಕ್ರಮವಹಿಸುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 23 ಎಲ್.ಜಿ.ಪಿ. 2022, ದಿನಾಂಕ: 20.10.2023 ರಲ್ಲಿ ಎಲ್ಲಾ ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ. |
| ಆ) | ನೆರೆಹೊರೆಯ ಭೂ ಮಾಲಿಕರು ರೈತರಿಗೆ ದಾರಿ ಬಿಡದೆ ತೊಂದರೆ ಕೊಡುತ್ತಿರುವ ಬಗ್ಗೆ ಎಷ್ಟು ದೂರುಗಳು ದಾಖಲಾಗಿವೆ; (ಜಿಲ್ಲಾವಾರು ಮಾಹಿತಿ ನೀಡುವುದು) ಹಾಗೂ ನೆರೆಹೊರೆಯ ಜಮೀನಿನಲ್ಲಿ ದಾರಿ ಬಳಸಲು ಸರ್ಕಾರದಿಂದ ಇರುವ ಆದೇಶಗಳಾವುವು; (ಆದೇಶದ ಪ್ರತಿಗಳನ್ನು ನೀಡುವುದು) | ಜಿಲ್ಲಾವಾರು ವಿವರವನ್ನು ಅನುಬಂಧದಲ್ಲಿ ನೀಡಲಾಗಿದೆ. |
| ಇ) | ನೆರೆಹೊರೆಯ ಜಮೀನಿನ ಮಾಲೀಕರು ಹಿಂಬದಿ ರೈತರಿಗೆ ದಾರಿ ಬಿಡದೆ ತೊಂದರೆ ನೀಡುತ್ತಿದ್ದರೆ ಅಂತಹ ಜಮೀನು ಮಾಲೀಕರ ವಿರುದ್ಧ ಯಾವ ಕ್ರಮವನ್ನು ಕೈಗೊಳ್ಳಲಾಗುವುದು; (ವಿವರ ನೀಡುವುದು) | ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 59ರಲ್ಲಿ ದಾರಿ ಹಕ್ಕುಗಳು ಮತ್ತು ಇತರೆ ಅನುಭೋಗದ ಹಕ್ಕುಗಳ ಬಗ್ಗೆ ತಿಳಿಸಲಾಗಿದ್ದು, ಸಂಬಂಧಪಟ್ಟ ಜಮೀನುಗಳ ಭಾಗಿದಾರರು ಒಪ್ಪಿರುವಂತೆ ಸಂದರ್ಭದಲ್ಲಿ ಹಕ್ಕುಗಳ ದಾಖಲೆ ರಿಜಿಸ್ಟರಿನಲ್ಲಿ ನಮೂದು ಮಾಡಲು ಅವಕಾಶವಿರುತ್ತದೆ. ನಕಾಶೆ ಕಂಡ ಕಾಲುದಾರಿ, ಬಂಡಿದಾರಿ ಅಥವಾ ರಸ್ತೆಗಳಲ್ಲಿ ಅನ್ಯ ಕೃಷಿ ಬಳಕೆದಾರರು ತಿರುಗಾಡಲು ಅವಕಾಶ ನೀಡದ ಅಡ್ಡಿಪಡಿಸುವಂತಹ ಅಥವಾ ಬಳಸಲು ಮುಚ್ಚಿರುವಂತಹ ಸಂದರ್ಭದಲ್ಲಿ ಅವುಗಳನ್ನು |
| ಈ) | ದಾರಿ ಸಮಸ್ಯೆಯನ್ನು ಪರಿಹರಿಸಲು ತಹಶೀಲ್ದಾರ್‌ರವರಿಗೆ ಮತ್ತು ಜಿಲ್ಲಾಧಿಕಾರಿಗಳಿಗೆ ಸಂಪೂರ್ಣ | |

| | | |
|---|---|---|
| | ಅಧಿಕಾರವನ್ನು ನೀಡಲಾಗಿದೆಯೇ (ನೀಡಿದ್ದಲ್ಲಿ, ಅವರ ಅಧಿಕಾರಿ ವ್ಯಾಪ್ತಿಯ ಬಗ್ಗೆ ಮಾಹಿತಿ ನೀಡುವುದು) | ತೆರವುಗೊಳಿಸಿ ಅಂತಹ ದಾರಿಗಳನ್ನು ಸುಗಮಗೊಳಿಸಲು ಕ್ರಮವಹಿಸುವಂತೆ ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 23 ಎಲ್.ಜಿ.ಪಿ 2022 ದಿನಾಂಕ: 20.10.2023 ರಲ್ಲಿ ಎಲ್ಲಾ ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ |
| ಊ) | ನಕಾಶೆ ಕಂಡ ಕಾಲು ದಾರಿ, ಬಂಡಿದಾರಿ ಒತ್ತುವರಿ ತೆರವುಗೊಳಿಸುವ ಬಗ್ಗೆ ಸರ್ಕಾರದಿಂದ ಹೊಸದಾಗಿ ಯಾವುದಾದರೂ ಆದೇಶ/ಸುತ್ತೋಲೆಗಳನ್ನು ಹೊರಡಿಸಲಾಗಿದೆಯೇ? (ಪ್ರತಿ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಆರ್.ಡಿ. 23 ಎಲ್.ಜಿ.ಪಿ. 2022, ದಿನಾಂಕ: 20.10.2023 ರಲ್ಲಿ ಎಲ್ಲಾ ತಹಶೀಲ್ದಾರರಿಗೆ ನಿರ್ದೇಶನ ನೀಡಲಾಗಿದೆ ಮಾಹಿತಿಯನ್ನು ಅನುಬಂಧ-2ರಲ್ಲಿ ನೀಡಲಾಗಿದೆ |

ಸಂಖ್ಯೆ: ಆರ್‌ಡಿ 97 ಎಲ್‌ಜಿಕ್ಯೂ 2026

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು

| ಚುಕ್ಕೆ ರಹಿತ ಪ್ರಶ್ನೆ 1775(2099) ಅನುಬಂಧ-1 | | |
|---|---|---|
| ಕ್ರ ಸಂ | ಜಿಲ್ಲೆ | ಸ್ವೀಕೃತಿ/ದಾಖಲಾಗಿರುವ ದೂರುಗಳು |
| 1 | ಬೆಂಗಳೂರು ನಗರ | 283 |
| 2 | ಬೆಂಗಳೂರು ದಕ್ಷಿಣ | 564 |
| 3 | ಬೆಂಗಳೂರು ಗ್ರಾಮಾಂತರ | 230 |
| 4 | ಚಿಕ್ಕಬಳ್ಳಾಪುರ | 12 |
| 5 | ಕೋಲಾರ | 120 |
| 6 | ತುಮಕೂರು | 2933 |
| 7 | ಚಿತ್ರದುರ್ಗ | 4 |
| 8 | ದಾವಣಗೆರೆ | 809 |
| 9 | ಶಿವಮೊಗ್ಗ | 147 |
| 10 | ಕೊಡಗು | 109 |
| 11 | ಹಾಸನ | 1127 |
| 12 | ಮಂಡ್ಯ | 0 |
| 13 | ಮೈಸೂರು | 11 |
| 14 | ಉಡುಪಿ | 19 |
| 15 | ಚಾಮರಾಜನಗರ | 29 |
| 16 | ದಕ್ಷಿಣ ಕನ್ನಡ | 66 |
| 17 | ಚಿಕ್ಕಮಗಳೂರು | 333 |
| 18 | ಬಾಗಲಕೋಟೆ | 14 |
| 19 | ಬೆಳಗಾವಿ | 138 |
| 20 | ವಿಜಯಪುರ | 86 |
| 21 | ಧಾರವಾಡ | 200 |
| 22 | ಗದಗ | 0 |
| 23 | ಹಾವೇರಿ | 64 |
| 24 | ಉತ್ತರ ಕನ್ನಡ | 125 |
| 25 | ಕಲಬುರ್ಗಿ | 83 |
| 26 | ಬೀದರ | 127 |
| 27 | ಬಳ್ಳಾರಿ | 0 |
| 28 | ರಾಯಚೂರು | 240 |
| 29 | ಕೊಪ್ಪಳ | 0 |
| 30 | ವಿಜಯನಗರ | 0 |
| 31 | ಯಾದಗಿರಿ | 41 |
|  | **ಒಟ್ಟು** | 7914 |

ಅನುಬಂಧ-2

**ಕರ್ನಾಟಕ ಸರ್ಕಾರ**

ಸಂಖ್ಯೆ: ಆರ್‌ಡಿ 23 ಎಲ್‌ಜಿಪಿ 2022

ಕರ್ನಾಟಕ ಸರ್ಕಾರ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ: 20.10.2023.

# ಸುತ್ತೋಲೆ

**ವಿಷಯ:** ರೈತರು ವ್ಯವಸಾಯದ ಉದ್ದೇಶಗಳಿಗಾಗಿ ತಿರುಗಾಡಲು ಬಳಸುವ ಖಾಸಗಿ ಜಮೀನುಗಳಲ್ಲಿ ಕಾಲುದಾರಿ, ಬಂಡಿದಾರಿ ಅಥವಾ ಸೌಲಭ್ಯ ಒದಗಿಸುವ ಸಲುವಾಗಿ ಕ್ರಮವಹಿಸುವ ಕುರಿತು

ರಾಜ್ಯದಲ್ಲಿ ರೈತರು ವ್ಯವಸಾಯದ ಉದ್ದೇಶಗಳಿಗಾಗಿ ಬಳಸುವ ಕೃಷಿ ಸಲಕರಣೆಗಳನ್ನು ಸಾಗಿಸಲು ಅನ್ಯ ಭೂಮಾಲೀಕರ ಖಾಸಗಿ ಜಮೀನುಗಳಲ್ಲಿ ತಿರುಗಾಡಲು 'ದಾರಿ' ಸಮಸ್ಯೆ ಇದ್ದು, ಬಳಕೆದಾರ ರೈತರುಗಳಿಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ. 'ದಾರಿ' ಸಮಸ್ಯೆ ಬಹುಕಾಲದಿಂದಲೂ ಇದ್ದು, ಅಕ್ಕಪಕ್ಕದ ಜಮೀನುಗಳ ರೈತರು ಕೆಲವು ಖಾಸಗಿ ಜಮೀನುಗಳನ್ನು ದಾಟಿಕೊಂಡು ಕೃಷಿ ಪೂರಕ ಚಟುವಟಿಕೆಗಳನ್ನು ಜರುಗಿಸಲು ಹಾಗೂ ಬೆಳೆದ ಫಸಲನ್ನು ಹೊರತರಲಾಗದೆ ನಷ್ಟ ಹೊಂದುತ್ತಿರುವುದು ಕೆಲವು ಮಾಧ್ಯಮಗಳಿಂದ ತಿಳಿದು ಬಂದಿರುತ್ತದೆ ಹಾಗೂ ಈ ಬಗ್ಗೆ ಸಾರ್ವಜನಿಕರಿಂದ ಮನವಿ/ದೂರುಗಳು ಸ್ವೀಕೃತವಾಗಿರುತ್ತವೆ.

ಗ್ರಾಮ ನಕಾಶೆ ಕಂಡ ದಾರಿಗಳಲ್ಲಿ ಬಳಕೆದಾರ ರೈತರು ತಿರುಗಾಡಲು ಅವಕಾಶವಿದ್ದಾಗ್ಯೂ ಕೆಲವು ಭೂಮಾಲೀಕರು ಬಳಕೆದಾರ ರೈತರುಗಳಿಗೆ ತಿರುಗಾಡಲು ಅಡ್ಡಿಪಡಿಸುತ್ತಿರುವುದು ಅಥವಾ ಅಂತಹ ಜಾಗಗಳನ್ನು ಮುಚ್ಚಿರುವುದು ಹಾಗೂ ರೈತರು ಬಹುಕಾಲದಿಂದಲೂ ಬಳಸುವ ದಾರಿಗಳಲ್ಲಿ ತಿರುಗಾಡಲು ಕೆಲವು ರೈತರ ಮಧ್ಯದ ವ್ಯಯಕ್ತಿಕ ದ್ವೇಷ/ಅಸೂಯೆಗಳು ಮತ್ತು ಹೊಂದಾಣಿಕೆಯ ಕೊರತೆಯಿಂದಾಗಿ ಬಳಕೆದಾರ ರೈತರ ತೊಂದರೆಗಳಿಗೆ ಬಹುತೇಕ ಕಾರಣಗಳಾಗಿರುವುದು ಕಂಡುಬರುತ್ತದೆ.

ಕರ್ನಾಟಕ ಭೂ ಕಂದಾಯ ನಿಯಮಗಳು, 1966ರ ನಿಯಮ 59 ರಲ್ಲಿ 'ದಾರಿಯ ಹಕ್ಕುಗಳು ಮತ್ತು ಇತರೆ ಅನುಭೋಗದ ಹಕ್ಕುಗಳ' ಬಗ್ಗೆ ತಿಳಿಸಲಾಗಿದ್ದು, ಸಂಬಂಧಪಟ್ಟ ಜಮೀನುಗಳ ಭಾಗಿದಾರರು ಒಪ್ಪಿರುವಂತಹ ಸಂದರ್ಭದಲ್ಲಿ ಹಕ್ಕುಗಳ ದಾಖಲೆ ರಿಜಿಸ್ಟರ್‌ನಲ್ಲಿ ನಮೂದು ಮಾಡಲು ಅವಕಾಶವಿದೆ.

The Indian Easement Act, 1882 ರಂತೆ ಪ್ರತಿ ಜಮೀನಿನ ಮಾಲೀಕರು ಅಥವಾ ಜಮೀನಿನ ಅನುಭವದಲ್ಲಿರುವವರು ಅವರ ಭೂಮಿಯನ್ನು ಪ್ರವೇಶಿಸುವ ಹಕ್ಕು ಮತ್ತು ವಹಿವಾಟಿನ (Easement) ಹಕ್ಕನ್ನು ಹೊಂದಿದ್ದು, ಇದಕ್ಕೆ ಬಾಜುದಾರರಿಂದ ಯಾವುದೇ ಹಸ್ತಕ್ಷೇಪಕ್ಕೆ ಅಥವಾ ಈ ಬಗ್ಗೆ ಸದರಿ

---2

ಹಕ್ಕನ್ನು ಆಕ್ಷೇಪಿಸುವುದಕ್ಕೆ ಅಧಿಕಾರವಿರುವುದಿಲ್ಲ ಎಂಬುದಾಗಿ ತಿಳಿಸಲಾಗಿದ್ದು, ಈ ನಿಟ್ಟಿನಲ್ಲಿ ಕ್ರಮವಹಿಸಲು ಅವಕಾಶವಿದೆ. ಅಲ್ಲದೇ, Code of Criminal Procedure, 1973ರ ಕಲಂ 147 ರನ್ವಯ 'ಭೂಮಿ ಮತ್ತು ನೀರಿನ ಹಕ್ಕಿನ ಉಪಯೋಗದ' ಕುರಿತು ಸ್ಥಳೀಯ ಶಾಂತಿಗೆ ಭಂಗ ಉಂಟಾಗುವ ಸಂದರ್ಭಗಳಲ್ಲಿ ಅದನ್ನು ನಿವಾರಿಸಲು ಕಾನೂನು ರೀತ್ಯಾ ತಹಶೀಲ್ದಾರ್ ರವರು ತಾಲ್ಲೂಕು ಕಾರ್ಯ ನಿರ್ವಾಹಕ ಮ್ಯಾಜಿಸ್ಟ್ರೇಟ್ ಆಗಿ ಕ್ರಮವಹಿಸುವ ಅಧಿಕಾರ ಹೊಂದಿರುತ್ತಾರೆ.

ಅದರಂತೆ, ತಾಲ್ಲೂಕಿನ ತಹಶೀಲ್ದಾರ್‌ಗಳು, ನಕಾಶೆ ಕಂಡ ಕಾಲುದಾರಿ, ಬಂಡಿದಾರಿ ಅಥವಾ ರಸ್ತೆಗಳಲ್ಲಿ ಅನ್ಯ ಕೃಷಿ ಬಳಕೆದಾರರು ತಿರುಗಾಡಲು ಅವಕಾಶ ನೀಡದೆ ಅಡ್ಡಿಪಡಿಸುವಂತಹ ಅಥವಾ ಬಳಸಲು ಮುಚ್ಚಿರುವಂತಹ ಸಂದರ್ಭದಲ್ಲಿ ಅವುಗಳನ್ನು ತೆರವುಗೊಳಿಸಿ ಅಂತಹ ತಿರುಗಾಡಲು ದಾರಿಗಳನ್ನು ಸುಗಮಗೊಳಿಸಲು ಕ್ರಮವಹಿಸುವಂತೆ ಸೂಚಿಸಿದೆ.

**(ವಿಮಲಮ್ಮ ಸಿ.)**
ಸರ್ಕಾರದ ಅಧೀನ ಕಾರ್ಯದರ್ಶಿ,
ಕಂದಾಯ ಇಲಾಖೆ (ಭೂ ಮಂಜೂರಾತಿ-1).

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು ರಾಜ್ಯಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು.

**ಇವರಿಗೆ:**

1. ಎಲ್ಲಾ ಪ್ರಾದೇಶಿಕ ಆಯುಕ್ತರು.
2. ಎಲ್ಲಾ ಜಿಲ್ಲಾಧಿಕಾರಿಗಳು.
3. ಕಂದಾಯ ಆಯುಕ್ತರು, ಕಂದಾಯ ಆಯುಕ್ತಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಯುಕ್ತರು, ಆಯುಕ್ತರು, ಭೂಮಿ & ಯು.ಪಿ.ಓ.ಆರ್, ಭೂಮಾಪನ ಕಂದಾಯ ವ್ಯವಸ್ಥೆ ಮತ್ತು ಭೂ ದಾಖಲೆಗಳ ಇಲಾಖೆ, ಕೆ.ಆರ್. ವೃತ್ತ ಬೆಂಗಳೂರು
5. ಎಲ್ಲಾ ಉಪ ವಿಭಾಗಾಧಿಕಾರಿಗಳು (ಜಿಲ್ಲಾಧಿಕಾರಿಗಳ ಮುಖಾಂತರ).
6. ಎಲ್ಲಾ ತಹಶೀಲ್ದಾರುಗಳು (ಜಿಲ್ಲಾಧಿಕಾರಿಗಳ ಮುಖಾಂತರ)

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು
2. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕಿ, ಕಂದಾಯ ಇಲಾಖೆ (ಭೂ ಮಂಜೂರಾತಿ & ಭೂ ಸುಧಾರಣೆ) ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ಭೂ ಮಂಜೂರಾತಿ-3).
5. ಪೀಠಾಧಿಕಾರಿ, ಕಂದಾಯ ಇಲಾಖೆ (ಭೂ ಮಂಜೂರಾತಿ-2)
6. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.